# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

| ಸಂಪುಟ ೧೫೧<br>Volume 151 | ಬೆಂಗಳೂರು, ಗುರುವಾರ, ಡಿಸೆಂಬರ್ ೮, ೨೦೧೬ (ಮಾರ್ಗಶಿರ ೧೭, ಶಕ ವರ್ಷ ೧೯೩೮)<br>Bengaluru, Thursday, December 8, 2016 (Margashira 17, Shaka Varsha 1938) | ಸಂಚಿಕೆ ೪೮<br>Issue 48 |
|---|---|---|


## ಭಾಗ ೬

## ಬೆಂಗಳೂರು ವಿಭಾಗಕ್ಕೆ ಮತ್ತು ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ, ತುಮಕೂರು, ಚಿತ್ರದುರ್ಗ, ದಾವಣಗೆರೆ ಮತ್ತು ಶಿವಮೊಗ್ಗ ಜಿಲ್ಲೆಗಳಿಗೆ ಸ್ಥಳೀಯವಾಗಿ ಅನ್ವಯವಾಗುವ ಅಧಿಸೂಚನೆಗಳು ಮತ್ತು ಆದೇಶಗಳು

**ಉಪನಗರ ವರ್ತುಲ ರಸ್ತೆ (STRR) ಯೋಜನಾ ಪ್ರಾಧಿಕಾರ ಹಾಗೂ ಮಹಾನಗರ ಆಯುಕ್ತರು, ಬೆಂ.ಮ.ಪ್ರ.ಪ್ರಾ. ಬೆಂಗಳೂರು.**

**ಸಾರ್ವಜನಿಕ ಪ್ರಕಟಣೆ**

**ಸಂಖ್ಯೆ: STRRPA/TP/ಮ.ಯೋ/03/2016-17, ದಿನಾಂಕ: 15-11-2016**

ವಿಷಯ: ಉಪನಗರ ವರ್ತುಲ ರಸ್ತೆ (STRR) ಸ್ಥಳೀಯ ಯೋಜನಾ ಪ್ರದೇಶದಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 10ರ ಅಡಿಯಲ್ಲಿ ಮಹಾಯೋಜನೆ ತಯಾರಿಕೆಯ ಇಚ್ಛೆಯನ್ನು ಘೋಷಿಸುವ ಬಗ್ಗೆ.

ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 36 ಬಿಎಂಆರ್ 2016, ದಿನಾಂಕ: 24-06-2016 ರಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 4(ಎ)(1) ರನ್ವಯ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಹಾಗೂ ರಾಮನಗರ ಜಿಲ್ಲೆಯ ಒಟ್ಟು 331 ಗ್ರಾಮಗಳನ್ನೊಳಗೊಂಡಂತೆ ಉಪನಗರ ವರ್ತುಲ ರಸ್ತೆ (STRR) ಸ್ಥಳೀಯ ಯೋಜನಾ ಪ್ರದೇಶವನ್ನು ಘೋಷಿಸಲಾಗಿರುತ್ತದೆ. ಉಪನಗರ ವರ್ತುಲ ರಸ್ತೆ (STRR) ಸ್ಥಳೀಯ ಯೋಜನಾ ಪ್ರದೇಶದ ನಕ್ಷೆಯನ್ನು ಸಾರ್ವಜನಿಕ ವೀಕ್ಷಣೆಗಾಗಿ ಪ್ರಾಧಿಕಾರದ ಕಛೇರಿ ಪ್ರಕಟಣಾ ಫಲಕದಲ್ಲಿ ಪ್ರಕಟಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ (10) ರ ಅಡಿಯಲ್ಲಿ 'ಮಹಾಯೋಜನೆ ತಯಾರಿಕೆ ಇಚ್ಛೆ' ಯನ್ನು ಈ ಯೋಜನಾ ಪ್ರಾಧಿಕಾರವು ಘೋಷಿಸುತ್ತದೆ. ಉಪನಗರ ವರ್ತುಲ ರಸ್ತೆ (STRR) ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ ತಯಾರಿಕೆ ಕುರಿತು 60 ದಿನಗಳ ಕಾಲಾವಧಿಗೆ ಸಾರ್ವಜನಿಕರಿಂದ ಸಲಹೆಗಳನ್ನು ಆಹ್ವಾನಿಸಲಾಗಿದೆ. ಆದ್ದರಿಂದ ಸಾರ್ವಜನಿಕರು ತಮ್ಮ ಸಲಹೆಗಳನ್ನು ಉಪನಗರ ವರ್ತುಲ ರಸ್ತೆ (STRR) ಯೋಜನಾ ಪ್ರಾಧಿಕಾರದ ಕಛೇರಿಗೆ ಖುದ್ದಾಗಿ ಅಥವಾ ನೋಂದಾಯಿತ ಅಂಚೆ ಮೂಲಕ ಈ ಪ್ರಕಟಣೆಯ ದಿನಾಂಕದಿಂದ 60 ದಿನಗಳೊಳಗಾಗಿ ಸಲ್ಲಿಸಲು ಕೋರಲಾಗಿದೆ. ಸದರಿ ಅವಧಿ ಮುಗಿದ ನಂತರ ಬಂದ ಸಲಹೆಗಳನ್ನು ಪರಿಗಣಿಸಲಾಗುವುದಿಲ್ಲ.

**ಸದಸ್ಯ ಕಾರ್ಯದರ್ಶಿಗಳು**
ಉಪನಗರ ವರ್ತುಲ ರಸ್ತೆ (STRR)
ಯೋಜನಾ ಪ್ರಾಧಿಕಾರ ಹಾಗೂ ಮಹಾನಗರ ಯೋಜಕರು,
ಬೆಂ.ಮ.ಪ್ರ.ಪ್ರಾ. ಬೆಂಗಳೂರು.

**ಅಧ್ಯಕ್ಷರು**
ಉಪನಗರ ವರ್ತುಲ ರಸ್ತೆ (STRR)
ಯೋಜನಾ ಪ್ರಾಧಿಕಾರ ಹಾಗೂ
ಮಹಾನಗರ ಆಯುಕ್ತರು, ಬೆಂ.ಮ.ಪ್ರ.ಪ್ರಾ. ಬೆಂಗಳೂರು.

PD -04
SC-100

VI-F-1 B/B